**All India Radio: Bangalore**
**Regional Bulletin In Kannada**
**13.07.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**13.07.2025 / 6.40 p.m.**
**<><><><>**

ಮುಖ್ಯಾಂಶಗಳು :

- ಸಿಗಂದೂರು ಸೇತುವೆ ಉದ್ಘಾಟನೆಗೆ ಕ್ಷಣಗಣನೆ - ನಾಳೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರಿಂದ ಲೋಕಾರ್ಪಣೆ
- ನಕಲಿ, ಕಳಪೆ ಗುಣಮಟ್ಟದ ರಸಗೊಬ್ಬರ ಪೂರೈಕೆ : ಕಠಿಣ ಕ್ರಮಕ್ಕೆ ರಾಜ್ಯ ಸರ್ಕಾರಕ್ಕೆ ಕೇಂದ್ರದ ನಿರ್ದೇಶನ
- ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಸ್ಕೌಟ್ಸ್ ಅಂಡ್ ಗೈಡ್ಸ್ ಕಡ್ಡಾಯಗೊಳಿಸಿದ ರಾಜ್ಯ ಸರ್ಕಾರ
- ರಾಜ್ಯದ ವಿವಿಧೆಡೆ ಸಾರ್ವಜನಿಕರಿಗೆ ರಕ್ಷಣೆ ಹಿನ್ನೆಲೆ - ಮನೆಮನೆ ಪೊಲೀಸ್ ಕಾರ್ಯಕ್ರಮ

<><><><>

ಶಿವಮೊಗ್ಗ ಶರಾವತಿ ನದಿಯ ಹಿನ್ನೀರಿನಲ್ಲಿ ನಿರ್ಮಿಸಲಾಗಿರುವ ದಶಕಗಳ ಕನಸಾದ ಸಿಗಂದೂರು ಸೇತುವೆಯನ್ನು ನಾಳೆ ಕೇಂದ್ರ ಹೆದ್ದಾರಿ ಖಾತೆ ಸಚಿವ ನಿತಿನ್ ಗಡ್ಕರಿ ಲೋಕಾರ್ಪಣೆಗೊಳಿಸಲಿದ್ದು ಕ್ಷಣಗಣನೆ ಆರಂಭಗೊಂಡಿದೆ. ಸುಮಾರು ೪೨೩ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಈ ಸೇತುವೆಯು, ಕರ್ನಾಟಕದ ಅತಿ ಉದ್ದದ ಒಳನಾಡು ಕೇಬಲ್-ಸ್ಟೇಯ್ಡ್ ಸೇತುವೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಆರು ದಶಕಗಳಿಂದ ಸಾಗರ ತಾಲೂಕಿನ ಶರಾವತಿಯ ಹಿನ್ನೀರಿನ ೪೦ಕ್ಕೂ ಹೆಚ್ಚು ಗ್ರಾಮಗಳ ಜನ ೬೦ ವರ್ಷಗಳಿಂದ ಈ ಸೇತುವೆಗಾಗಿ ಕಾಯುತ್ತಿದ್ದರು. ಈ ಭಾಗದ ಅನೇಕ ಹಳ್ಳಿಗಳಿಗೆ ಲಾಂಚ್‌ಗಳೇ ಸಂಪರ್ಕ ವ್ಯವಸ್ಥೆಯಾಗಿತ್ತು. ಸಂಜೆ ನಂತರ ಈ ಗ್ರಾಮಗಳಿಗೆ ಸಂಪರ್ಕ ಇರಲಿಲ್ಲ. ಸಾಗರ ತಾಲೂಕಿನ ಅಂಬಾರಗೋಡ್ಲು-ಕಳಸವಳ್ಳಿ ಸಂಪರ್ಕ ಕಲ್ಪಿಸುವ ಶರಾವತಿ ಸೇತುವೆ ಶಂಕುಸ್ಥಾಪನೆಯನ್ನು ೨೦೧೮ರಲ್ಲಿ ಕೇಂದ್ರ ಸಚಿವ ನಿತಿನ್ ಗಡ್ಕರಿ

ಮಾಡಿದ್ದರು. ಸುಮಾರು ೨.೨೫ ಕಿಲೋಮೀಟರ್ ಉದ್ದದ ಈ ಸೇತುವೆಯನ್ನು ೬ ವರ್ಷಗಳಲ್ಲಿ ಪೂರ್ಣಗೊಳಿಸಲಾಗಿದೆ ಎಂದು ಶಿವಮೊಗ್ಗ ಸಂಸದ ಬಿವೈ ರಾಘವೇಂದ್ರ ತಿಳಿಸಿದ್ದಾರೆ.

**ಬೈಟ್ :- ಬಿವೈ ರಾಘವೇಂದ್ರ ಶಿವಮೊಗ್ಗ ಸಂಸದ ( ೩೬ ಸೆಕೆಂಡುಗಳು )**

ಶರಾವತಿ ಸೇತುವೆಯ ಲೋಕಾರ್ಪಣೆ ಬಳಿಕ ಸಾಗರದ ನೆಹರು ಮೈದಾನದಲ್ಲಿ ನಡೆಯುವ ಸಾರ್ವಜನಿಕ ಸಭೆಯಲ್ಲಿ ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಮಂಜೂರಾಗಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಕೇಂದ್ರ ಸಚಿವ ಗಡ್ಕರಿ ಅವರು ಚಾಲನೆ ಕೂಡ ನೀಡಲಿದ್ದಾರೆ.

<><><><>

ನಕಲಿ ಮತ್ತು ಕಳಪೆ ಗುಣಮಟ್ಟದ ರಸಗೊಬ್ಬರಗಳ ಪೂರೈಕೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಕರ್ನಾಟಕ ಸೇರಿದಂತೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಕೇಂದ್ರ ಸರ್ಕಾರ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಈ ಕುರಿತು ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದು, ದೇಶಾದ್ಯಂತ ನಕಲಿ ರಸಗೊಬ್ಬರಗಳು ಮತ್ತು ಸಹಾಯಧನ ಹೊಂದಿರುವ ರಸಗೊಬ್ಬರಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಗಟ್ಟಲು ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ. ಪತ್ರದಲ್ಲಿ ರಸಗೊಬ್ಬರಗಳನ್ನು ಮಾರಾಟ ಮಾಡುವವರ ಪರವಾನಗಿ ರದ್ದುಪಡಿಸುವುದು ಸೇರಿದಂತೆ, ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ. ಎಲ್ಲ ರಾಜ್ಯಗಳು ಈ ಕುರಿತಂತೆ ರಾಜ್ಯವ್ಯಾಪಿ ಅಭಿಯಾನ ಪ್ರಾರಂಭಿಸಬೇಕು. ಸಾಂಪ್ರದಾಯಿಕ ರಸಗೊಬ್ಬರಗಳಿಗೆ ನ್ಯಾನೊ ಅಥವಾ ಜೈವಿಕ ರಸಗೊಬ್ಬರಗಳ ಹೆಸರು ನೀಡುವ ಮೂಲಕ ರೈತರಿಗೆ ತಪ್ಪು ಮಾಹಿತಿ ನೀಡುವುದನ್ನು ತಡೆಗಟ್ಟಬೇಕು ಎಂದು ಸಚಿವರು ಸೂಚನೆ ನೀಡಿದ್ದಾರೆ.

<><><><>

ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಕಡ್ಡಾಯ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿರುವುದು ಶ್ಲಾಘನೀಯ, ರಾಜ್ಯಾದ್ಯಂತ ಶಿಸ್ತುಬದ್ಧವಾಗಿ ಸಂಘಟಿಸಲು ಸರ್ಕಾರದ ಜೊತೆ ಕೈಜೋಡಿಸುವುದಾಗಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ನ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್ ಸಿಂಧ್ಯಾ ಹೇಳಿದ್ದಾರೆ. ಹಾಸನ ನಗರದ ಸ್ಕೌಟ್ಸ್ ಮತ್ತು ಗೈಡ್ಸ್ ಭವನದಲ್ಲಿ ಇಂದು ಈ ಬಗ್ಗೆ ಸಭೆ ನಡೆಸಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತ್ ಸ್ಕೌಟ್ಸ್

ಮತ್ತು ಗೈಡ್ಸ್ ಒಂದು ಶಿಸ್ತುಬದ್ಧ ಹಾಗೂ ದೇಶಪ್ರೇಮ ಮೂಡಿಸುವ ಸಂಸ್ಥೆಯಾಗಿದೆ. ಈಗಾಗಲೇ ರಾಜ್ಯಾದ್ಯಂತ ಲಕ್ಷಾಂತರ ಸದಸ್ಯರಿದ್ದು ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಾಗಲಿದೆ ಎಂದು ತಿಳಿಸಿದರು.

**ಧ್ವನಿ:ಪಿ.ಜಿ.ಆರ್‌ಸಿಂಧ್ಯಾ, ಸ್ಕೌಟ್ಸ್ ಮತ್ತು ಗೈಡ್ಸ್, ಮುಖ್ಯ ಆಯುಕ್ತ (೩೩ ಸೆಕೆಂಡುಗಳು)**

<><><>

ರೈಲ್ವೆಯ ಎಲ್ ಸಿ ಗೇಟ್‌ಗಳನ್ನು ಹಾಗೂ ಇಲ್ಲಿ ಕೆಲಸ ಮಾಡುವಂತಹ ಕಾರ್ಮಿಕರನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಸರ್ಕಾರ ಕೆಳಸೇತುವೆ ಮತ್ತು ಮೇಲ್ಸೇತುವೆಗಳಿಗೆ ಅನುದಾನ ನೀಡಿದೆ ಎಂದು ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ ಸೋಮಣ್ಣ ತಿಳಿಸಿದ್ದಾರೆ. ಬೆಂಗಳೂರಿನ ಚಲ್ಲಘಟ್ಟದ ರೈಲ್ವೆ ಅಂಡರ್ ಪಾಸ್ ಉದ್ಘಾಟನೆ ಹಾಗೂ ರಾಮೋಹಳ್ಳಿಯ ಕೆಳಸೇತುವೆ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ೨೦೧೪ರಿಂದ ಇಲ್ಲಿಯವರೆಗೂ ಕರ್ನಾಟಕದಲ್ಲಿ ೬೪೦ಕ್ಕೂ ಅಧಿಕ ಮೇಲ್ಸೇತುವೆ, ಮತ್ತು ಕೆಳ ಸೇತುವೆಗಳನ್ನ ನಿರ್ಮಾಣ ಮಾಡಲಾಗಿದೆ ಎಂದು ಹೇಳಿದ್ದಾರೆ. ಬೆಂಗಳೂರು ನಗರದ ಅಭಿವೃದ್ಧಿಗೆ ರೈಲ್ವೇ ಇಲಾಖೆ ಕೊಡುಗೆ ಅಪಾರ ಎಂದು ತಿಳಿಸಿದ ಅವರು ಸಂಗೋಳ್ಳಿ ರಾಯಣ್ಣ ರೈಲ್ವೇ ನಿಲ್ದಾಣದಲ್ಲಿ ರೈಲ್ವೇ ಯಾರ್ಡ್ ನವೀಕರಣ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಸಾರ್ವಜನಿಕರಿಗೆ ರಕ್ಷಣೆ ನೀಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಜನ ಸ್ನೇಹಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಇದೀಗ ಸರ್ಕಾರವು ಮನೆಮನೆಗೆ ಪೊಲೀಸ್ ಕಾರ್ಯಕ್ರಮವನ್ನು ಜಾರಿಗೆ ತರಲಾಗಿದ್ದು, ಈ ನಿಟ್ಟಿನಲ್ಲಿ ಕೊಡಗಿನ ಗೋಣಿಕೊಪ್ಪ ಪೊಲೀಸ್ ಠಾಣಾಧಿಕಾರಿ ಪ್ರದೀಪ್ ಕುಮಾರ್ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಕೋಲಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್ ಕೋಲಾರ ತಾಲೂಕಿನ ಸುಗಟೂರು ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಪೊಲೀಸ್ ಸಿಬ್ಬಂದಿಗಳು ಅಭಿಯಾನ ಕೈಗೊಂಡು, ಸೈಬರ್ ಅಪರಾಧ, ಮಾದಕ ವಸ್ತು, ಬಾಲಾಪರಾಧ, ಪೋಕ್ಸೋ ಕಾಯ್ದೆ, ಮನೆ ಕಳ್ಳತನ, ಸರ ಕಳ್ಳತನ, ರಸ್ತೆ ಸಂಚಾರ ನಿಯಮ ಮುಂತಾದ ವಿಷಯಗಳ ಬಗ್ಗೆ ಅರಿವು ಮೂಡಿಸಿದರು. ಇದೇ ಸಂದರ್ಭದಲ್ಲಿ ಮನೆಯಲ್ಲಿರುವವರ ಹೆಸರು, ಮೊಬೈಲ್ ನಂಬರ್ ಪಡೆದುಕೊಳ್ಳಲಾಯಿತು.

<><><>

ಬಡವರಿಗೆ ಅನುಕೂಲವಾಗುವಂತೆ ರಾಜ್ಯದಲ್ಲಿ ಅನಧಿಕೃತ ಆಸ್ತಿಗಳಿಗೆ ಎ.ಖಾತಾ, ಬಿ.ಖಾತಾ ನೀಡುವ ಪ್ರಕ್ರಿಯೆ ಶೇಕಡ ೫೦ ರಷ್ಟು ಯಶಸ್ವಿಯಾಗಿದೆ. ಮುಂದಿನ ದಿನಗಳಲ್ಲಿ ಪಂಚಾಯಿತಿ ಹಂತದಲ್ಲೂ ಖಾತೆ ಕೊಡಲಾಗುತ್ತದೆ ಎಂದು ಪೌರಾಡಳಿತ ಸಚಿವ ರಹೀಮ್ ಖಾನ್ ಹೇಳಿದರು. ಸಿಂದನೂರ್ ನಲ್ಲಿ ಮಾತಾನಾಡಿದ ಅವರು ಈ ಬಗ್ಗೆ ಗೆಜೆಟ್ ನೋಟಿಫಿಕೇಶನ್ ಮಾಡಲಾಗಿದೆ. ಆಯಾ ಜಿಲ್ಲಾಧಿಕಾರಿಗಳಿಗೆ ಮಾನಿಟರಿಂಗ್ ಜವಾಬ್ದಾರಿ ನೀಡಲಾಗಿದೆ ಎಂದು ಅವರು ತಿಳಿಸಿದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ವಿಜಯಪುರದ ಬಸ್ ನಿಲ್ದಾಣದಲ್ಲಿ ನಿರ್ಮಿಸಿರುವ ಸಂವಿದಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಯನ್ನು ಆಹಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಇಂದು ಅನಾವರಣಗೊಳಿಸಿದರು. ಈ ವೇಳೆ ಮಾತನಾಡಿದ ಅವರು, ಅಂಬೇಡ್ಕರ್ ರವರ ತತ್ವ ಚಿಂತನೆಗಳನ್ನು ಅವರ ಆದರ್ಶಗಳನ್ನು ನಾವೆಲ್ಲರು ಮೈಗೂಡಿಸಿಕೊಳ್ಳಬೇಕು. ಅಂಬೇಡ್ಕರ್ ರವರು ಈ ದೇಶದ ಶಕ್ತಿ ಅವರು ನೀಡಿರುವ ಸಂವಿಧಾನದಡಿ ನಾವು ಎಲ್ಲಾ ಅಧಿಕಾರಗಳನ್ನು ಅನುಭವಿಸಲು ಸಾಧ್ಯವಾಗಿದೆ ಎಂದರು.

<><><>

ಕಾಂಗ್ರೆಸ್ ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ರಾಜ್ಯಕ್ಕೆ ಆಗಮಿಸಿ, ಕೈಗೊಳ್ಳಬೇಕಾದ ಸುಧಾರಣಾ ಕ್ರಮಗಳ ಬಗ್ಗೆ ಶಾಸಕರ ಅಭಿಪ್ರಾಯ ಸಂಗ್ರಹಿಸಿದ್ದಾರೆಯೇ ವಿನಃ ನಾಯಕತ್ವ ಬದಲಾವಣೆ ವಿಷಯಕ್ಕೆ ಸಂಬಂಧಿಸಿ ಅವರು ಬಂದದ್ದಲ್ಲ ಎಂದು ವಿಧಾನಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಸಮರ್ಥಿಸಿಕೊಂಡಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಗಳೂರಿನಲ್ಲಿ ಸೌಹಾರ್ದತೆಯ ವಾತಾವರಣ ನೆಲೆಗೊಳಿಸುವ ಸಲುವಾಗಿ ನಮ್ಮ ತಂಡ ಸರ್ಕಾರಕ್ಕೆ ವರದಿ ನೀಡಿದೆ. ಈ ಹಿನ್ನಲೆಯಲ್ಲಿ ಮಂಗಳೂರಲ್ಲಿ ಸರ್ವಧರ್ಮ ಗುರುಗಳ ಸಭೆ ನಡೆಯಬೇಕು. ಈ ಮೂಲಕ ಸಮಾಜಕ್ಕೆ ಶಾಂತಿ, ಸೌಹಾರ್ದತೆಯ ಸಂದೇಶ ಸಾರಬೇಕು. ಶಾಂತಿ ಸಮಿತಿ ಸಭೆ, ರಾಜಕಾರಣಿಗಳ ಸಭೆ ನಡೆಸಿದರೆ ಪ್ರಯೋಜನವಾಗದು ಎಂದ ಅವರು ಹೇಳಿದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಕರ್ನಾಟಕ ಜಾನಪದ ಪರಿಷತ್ ಹಾಗೂ ದೊಡ್ಡಬಳ್ಳಾಪುರ ಗಾಳಿಪಟ ಕಲಾಸಂಘ ಸಹಯೋಗದಲ್ಲಿ ರಾಜ್ಯ ಮಟ್ಟದ ಗಾಳಿಪಟ

ಉತ್ಸವ ನಡೆಯಿತು. ರಾಜ್ಯದ ವಿವಿಧೆಡೆಗಳಿಂದ ಆಗಮಿಸಿದ್ದ ಗಾಳಿಪಟ ಕಲಾವಿದರಿಂದ, ಚಿತ್ತಾಕರ್ಷಕ ಗಾಳಿ ಪಟಗಳ ಪ್ರದರ್ಶನ ನಡೆಯಿತು.

<><><><>

ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾದ ಮಾಧ್ಯಮ ಸ್ವಸ್ಥ ಸಮಾಜ ನಿರ್ಮಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ರಾಜಕೀಯ, ಸಾರ್ವಜನಿಕ ಆಡಳಿತ ಹಾಗೂ ಮಾಧ್ಯಮ ಸಹಯೋಗದಲ್ಲಿ ಜವಾಬ್ದಾರಿಗಳನ್ನು ನಿರ್ವಹಿಸಿದರೆ ಸಮಾಜಕ್ಕೆ ಉತ್ತಮ ಸೇವೆ ಒದಗಿಸಲು ಸಾಧ್ಯವಾಗುತ್ತದೆ ಎಂದು ಬೆಳಗಾವಿ ಉತ್ತರ ಕ್ಷೇತ್ರದ ಶಾಸಕ ರಾಜು ಸೇಠ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಆಯೋಜಿಸಿದ ಪತ್ರಿಕಾ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>